**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 92/2020**

**ಚಾ.ಸಾಃ 10, ಫ್ರಾ.ಸಾಃ 05**

| | |
|---|---|
| ಸಾಕ್ಷಿದಾರನ ಹೆಸರು | ವಸಂತ ಆಚಾರ್ |
| ತಂದೆಯ ಹೆಸರು | ರಾಮಾ ಆಚಾರ್ |
| ವಯಸ್ಸು | 58 ವರ್ಷಗಳು |
| ಉದ್ಯೋಗ | ಪೋಲೀಸ್ ನಿರೀಕ್ಷಕರು, ಗೋಕರ್ಣ ಪೋಲೀಸ್ ಠಾಣೆ |
| ವಾಸ್ತವ್ಯ | ಗೋಕರ್ಣ |

**ಸಾಕ್ಷಿಯನ್ನು ದಿನಾಂಕಃ 30-08-2024 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 25-09-2019 ರಿಂದ 03-10-2020 ರ ವರೆಗೆ ಹೊನ್ನಾವರ ಪೋಲೀಸ್ ಠಾಣೆಯಲ್ಲಿ ಪೋಲೀಸ್ ವೃತ್ತ ನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ **31-07-2021** ನಾನು ಸಿಬ್ಬಂದಿಯೊಂದಿಗೆ ಕಡತೋಕಾ ಜಡ್ಡಿಗದ್ದೆ ಗಸ್ತು ಕರ್ತವ್ಯ ಮಾಡುತ್ತಿದ್ದಾಗ ಚಂದಾವರ ಕಡೆಯಿಂದ ಮೋಟಾರು ಸೈಕಲ್ಲಿನಲ್ಲಿ 2 ಜನ ಬರುತ್ತಿದ್ದು ಅವರನ್ನು ಹಿಡಿದು ವಿಚಾರಿಸಲಾಗಿ ಅವರು ಯಾವುದೇ ಸಮರ್ಪಕವಾದ ಉತ್ತರವನ್ನು ನೀಡಿರುವುದಿಲ್ಲ. ಆದ್ದರಿಂದ ಅವರನ್ನು ಠಾಣೆಗೆ ಕರೆತಂದು ಹೆಸರು, ವಿಳಾಸ ವಿಚಾರಿಸಲಾಗಿ ಅವರು ಸಜ್ಜದ್ ಅಹ್ಮದ್ ತಂದೆ ಕುತುಬುದ್ದಿನ್ ಗಣಿ ಮತ್ತು ಮುಬಾಶಿರ್ ಕುತುಬುದ್ದಿನ್ ಗಣಿ, ಚಂದಾವರ ಎಂದು ತಿಳಿಸಿರುತ್ತಾರೆ. ಸಂಶಯದಿಂದ ಅವರನ್ನು ಕೂಲಂಕುಷವಾಗಿ ವಿಚಾರಿಸಲಾಗಿ ಅವರು ಈ ಪ್ರಕರಣದಲ್ಲಿ ಕಳುವು ಮಾಡಿರುವುದನ್ನು ಒಪ್ಪಿಕೊಂಡು ಸ್ವ ಖುಷಿ ಹೇಳಿಕೆಯನ್ನು ನೀಡಿರುತ್ತಾರೆ. ಅವರು ತಮ್ಮ ಹೇಳಿಕೆಯಲ್ಲಿ ಈ ಪ್ರಕರಣ ಅಲ್ಲದೇ ಇತರೇ 8 ಪ್ರಕರಣಗಳಲ್ಲಿ ತಾವು ಕಳುವು ಮಾಡಿರುವುದಾಗಿ ತಿಳಿಸಿರುತ್ತಾರೆ. ಆರೋಪಿತರು ತಾವು ಕಳುವು ಮಾಡಿರುವ ಸ್ಥಳವನ್ನು ಮತ್ತು ಮಾಲಿನ ಬಗ್ಗೆ ಮಾಹಿತಿ ನೀಡುವುದಾಗಿ ಹೇಳಿರುತ್ತಾರೆ. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ 17-07-2019 ರಂದು ಚಂದಾವರದ ಶ್ರೀ ದುರ್ಗಾ ಪರಮೇಶ್ವರಿ ದೇವಸ್ಥಾನಕ್ಕೆ ಹಾಕಿದ ಬಾಗಿಲನ್ನು ಮುರಿದು ಗರ್ಭ ಗುಡಿಯಲ್ಲಿದ್ದ ಕಾಣಿಕೆ ಹುಂಡಿಯನ್ನು ಒಡೆದು ಅದರಲ್ಲಿದ್ದ ರೂ.3,000-00 ಹಣವನ್ನು ಕಳುವು ಮಾಡಿರುವುದಾಗಿ ಹೇಳಿರುತ್ತಾರೆ. ಅದೇ ದಿನ ಆರೋಪಿತರು ಕೃತ್ಯಕ್ಕೆ ಬಳಸಿದ್ದ ಕಾರನ್ನು ಮತ್ತು 2 ಕಬ್ಬಿಣದ ರಾಡನ್ನು ಮತ್ತು ಕಳುವು ಪ್ರಕರಣದ ಒಂದು ಮೂಗುತಿಯನ್ನು ಮನೆಯಲ್ಲಿ ಇಟ್ಟಿರುವುದಾಗಿ ಹೇಳಿರುತ್ತಾರೆ. ಅದರಂತೆ ಠಾಣೆಗೆ ಇಬ್ಬರು ಪಂಚರನ್ನು ಬರಮಾಡಿಕೊಂಡು ಅವರಿಗೆ ವಿಚಾರ ತಿಳಿಸಿದ್ದು ಅವರು ಒಪ್ಪಿಕೊಂಡ ನಂತರ ಆರೋಪಿತರನ್ನು ಪಂಚರೊಡನೆ ಆರೋಪಿತರು ನಮ್ಮನ್ನು ಕರೆದುಕೊಂಡು ಹೋದಂತೆ ಚಂದಾವರ ಗ್ರಾಮದ ತೊಯಿದಾ ಮೊಹಲ್ಲಾಕ್ಕೆ ಕರೆದಕೊಂಡು ಹೋಗಿದ್ದು ಅಲ್ಲಿ ಆರೋಪಿತರು ಅವರ ಮನೆಯ ಮುಂಭಾಗದಲ್ಲಿ ನಿಲ್ಲಿಸಿದ್ದ ಕಾರನ್ನು ತೋರಿಸಿ ಕೃತ್ಯಕ್ಕೆ ಬಳಸಿದ ಕಾರು ಅಂತ ಹೇಳಿರುತ್ತಾರೆ. ಸದರಿ ಕಾರನ್ನು ಪರಿಶೀಲಿಸಿದ್ದು

ಆರೋಪಿತರು ಸದರಿ ಕಾರಿನ ಡ್ಯಾಶಬೋರ್ಡನಲ್ಲಿ ಇಟ್ಟಿದ್ದ ಕೃತ್ಯಕ್ಕೆ ಬಳಸಿದ್ದ ಎರಡು ಕಬ್ಬಿಣದ ರಾಡನ್ನು ತೋರಿಸಿರುತ್ತಾರೆ. ನಂತರ ಆರೋಪಿತರು ನಮ್ಮನ್ನು ಮನೆಯ ಒಳಗೆ ಕರೆದುಕೊಂಡು ಹೋಗಿದ್ದು ಕಪಾಟಿನಲ್ಲಿ ಇಟ್ಟಿದ್ದ ಒಂದು ಮೂಗುತಿಯನ್ನು ತಂದು ಹಾಜರುಪಡಿಸಿರುತ್ತಾರೆ. ಕಾರು, ಕಬ್ಬಿಣದ ರಾಡು ಮತ್ತು ಮೂಗುತಿಯನ್ನು ಪಂಚರ ಸಮಕ್ಷಮ ಪಂಚನಾಮೆಯಡಿಯಲ್ಲಿ ಅಮಾನತ್ತುಪಡಿಸಿಕೊಂಡಿರುತ್ತೇನೆ. ಸದರಿ ಪಂಚನಾಮೆಯ ದೃಢೀಕೃತ ನಕಲನ್ನು ಈಗ ನೋಡುತ್ತಿದ್ದು ನಿಪಿ-8 ಎಂದು, ಸಾಕ್ಷಿ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು.

ಮುಂದುವರಿದ ಮುಖ್ಯ ವಿಚಾರಣೆಯನ್ನು ಮುಂದೂಡಲಾಯಿತು.

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ.**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**